Akashvani : Bangalore
Regional Bulletin In Kannada
01.11.2025 / 6.40 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕನ್ನಡ ಹೋರಾಟಗಾರರ ಮೇಲಿನ ಪ್ರಕರಣ ಹಿಂಪಡೆಯಲು ರಾಜ್ಯ ಸರ್ಕಾರ ನಿರ್ಧಾರ
- ಯುವ ಜನತೆ ಓದುವ ಸಂಸ್ಕೃತಿ ಬೆಳೆಸುವಂತೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಕರೆ
- ಪ್ರತಿಪಕ್ಷ ನಾಯಕ ಅಶೋಕ ನೇತೃತ್ವದಲ್ಲಿ ಸುರಂಗ ರಸ್ತೆ ಸಮಿತಿ ರಚನೆಗೆ ಸಿದ್ಧ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ನಾಳೆ ರಾಜ್ಯಾದ್ಯಂತ ಕೆ-ಸೆಟ್ ಪರೀಕ್ಷೆ ; ೩೧೮ ಕೇಂದ್ರಗಳಲ್ಲಿ ಬಿಗಿ ಭದ್ರತೆ, ವಸ್ತ್ರ ಸಂಹಿತೆ ಪಾಲಿಸಲು ಸೂಚನೆ
- ಎರ್ನಾಕುಲಂ-ಬೆಂಗಳೂರು ನಡುವೆ ವಂದೇ ಭಾರತ್ ರೈಲು ಸಂಚಾರ ಶೀಘ್ರವೇ ಆರಂಭ

****************

ನಾವೆಲ್ಲರೂ ಕನ್ನಡ ನೆಲ, ಜಲ, ಭಾಷೆ, ಸಂಸ್ಕೃತಿ ಬಗ್ಗೆ ಅಭಿಮಾನ, ಪ್ರೀತಿ ಬೆಳೆಸಿಕೊಳ್ಳಬೇಕು. ಇದಕ್ಕಾಗಿ ಯಾರು ಯಾವುದೇ ಭಾಷೆಯಲ್ಲಿ ಮಾತನಾಡಿದರೂ ನೀವು ಕನ್ನಡದಲ್ಲೇ ಉತ್ತರ ಕೊಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಭುವನೇಶ್ವರಿ ಹಾಗೂ ಅಣ್ಣಮ್ಮ ದೇವತೆಯ ವೈಭವದ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಬೆಳಗಾವಿ ವಿಚಾರದಲ್ಲಿ ಮಹಾಜನ್ ವರದಿಯೇ ಅಂತಿಮ ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ಕನ್ನಡ ಹೋರಾಟಗಾರರ ಮೇಲಿನ ಪ್ರಕರಣಗಳನ್ನು ವಾಪಾಸ್ ಪಡೆಯಲಾಗುವುದು ಎಂದು ಮುಖ್ಯಮಂತ್ರಿ ಘೋಷಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (ಆರ್‌ಎನ್‌ಯು)

****************

ಸಾವಿರ ಭಾಷೆಗಳಲ್ಲಿ ಮಾತೃಭಾಷೆ ಸರ್ವೋಚ್ಚವಾಗಿದ್ದು, ಕನ್ನಡ ತಾಯಿಯ ಮಕ್ಕಳಾಗಿ ನಮ್ಮ ಭೂಮಿ ಮತ್ತು ಭಾಷೆಯ ಬಗ್ಗೆ ಹೆಮ್ಮೆ ಪಡೋಣ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ ಪುಸ್ತಕ ಮೇಳದಲ್ಲಿ ಮಾತನಾಡಿದ ಅವರು, ಓದುವ ಸಂಸ್ಕೃತಿ ಬೆಳೆಯಬೇಕು, ಯುವಕರು ಮೊಬೈಲ್ ಫೋನ್‌ಗಳಲ್ಲಿ ಕಳೆದು ಹೋಗುವ ಬದಲು ಪುಸ್ತಕಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

ರಾಜ್ಯ ಸರ್ಕಾರವು ಅಂತಹ ಸಂಸ್ಕೃತಿಗೆ ಪ್ರೋತ್ಸಾಹಿಸಿ, ಸಾರ್ವಜನಿಕ ಗ್ರಂಥಾಲಯಗಳಿಗೆ ಪುಸ್ತಕಗಳನ್ನು ಖರೀದಿಸುವ ಪ್ರಕ್ರಿಯೆ ಆರಂಭಿಸಬೇಕು ಎಂದು ಹೇಳಿದ್ದಾರೆ.

****************

ರಾಜ್ಯದ ವಿವಿಧೆಡೆ ಕನ್ನಡ ರಾಜ್ಯೋತ್ಸವದ ಸಂಭ್ರಮ ಮನೆ ಮಾಡಿದೆ. ಎಲ್ಲಿ ನೋಡಿದರೂ ಕನ್ನಡದ ಬಾವುಟಗಳು ರಾರಾಜಿಸುತ್ತಿವೆ.

ಕನ್ನಡದ ಮಹತ್ವವನ್ನು ಹೊರದೇಶಗಳಲ್ಲಿ ಪಸರಿಸುವ ಕೆಲಸವನ್ನು ಅನೇಕ ಸಂಘಟನೆಗಳು ಮಾಡುತ್ತಿದ್ದು, ಅಂತಹ ಸಂಘಟನೆಗಳಿಗೆ ಸರ್ಕಾರ ನೆರವು ನೀಡುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ಧ್ವಜಾರೋಹಣ ನೆರವೇರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕನ್ನಡ ನಾಡು-ನುಡಿಯ ಹಿತ ಕಾಯುವುದಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ.

ತಂತ್ರಜ್ಞಾನ, ನವೋದ್ಯಮ ಹಾಗೂ ಪರಿಸರ ಸಂರಕ್ಷಣೆಯ ಮೂಲಕ ರಾಜ್ಯವನ್ನು  ಮತ್ತಷ್ಟು ಅಭಿವೃದ್ಧಿ ಪಥದತ್ತ ಕೊಂಡೊಯ್ಯಬೇಕಿದೆ ಎಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಮತ್ತು ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ತಿಳಿಸಿದ್ದಾರೆ.

ಕೇಂದ್ರ ಸರ್ಕಾರ ತನ್ನ ಅಧಿಕಾರ ದುರುಪಯೋಗಪಡಿಸಿಕೊಂಡು ಬಲವಂತವಾಗಿ ಹಿಂದಿ ಹೇರಲು ಹುನ್ನಾರ ನಡೆಸುತ್ತಿದೆ. ಈ ಬಗ್ಗೆ ಕನ್ನಡಿಗರು ಜಾಗೃತರಾಗಬೇಕು ಎಂದು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅಭಿಪ್ರಾಯಪಟ್ಟಿದ್ದಾರೆ.

ಕನ್ನಡ ಭಾಷೆಯನ್ನು ಸದೃಡವಾಗಿ ಉಳಿಸಿ, ಬೆಳೆಸುವ ಜವಾಬ್ದಾರಿ ನಮ್ಮ ನಿಮ್ಮೆಲ್ಲರ ಮೇಲಿದೆ ಎಂದು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ತಿಳಿಸಿದ್ದಾರೆ.

೭೦ನೇ ಕನ್ನಡ ರಾಜ್ಯೋತ್ಸವ ಸಮಾರಂಭ ಗದಗ ನಗರದ ಕೆ.ಎಚ್.ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿತು. ಜಿಲ್ಲಾ ಉಸ್ತುವಾರಿ ಸಚಿವ  ಎಚ್.ಕೆ.ಪಾಟೀಲ್ ಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವದ ಶುಭ ಸಂದೇಶ ನೀಡಿದರು.

ಉಡುಪಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಆರ್.ಹೆಬ್ಬಾಳ್ಕರ್ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿದರು.

ಕರ್ನಾಟಕದ ನೆಲ, ಜಲ, ಕನ್ನಡ ಭಾಷೆ ಹಾಗೂ ಸಂಸ್ಕೃತಿಯನ್ನು  ರಕ್ಷಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.

ಕನ್ನಡ ಭಾಷೆ ನಿರಂತರವಾಗಿ ಉಳಿಯಲು ಹಾಗೂ ಬೆಳೆಯಲು ನಾವೆಲ್ಲರೂ ಶ್ರಮಿಸಬೇಕು ಎಂದು ಉತ್ತರಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ  ವೈದ್ಯ ಹೇಳಿದ್ದಾರೆ.

****************

ಪ್ರತಿವರ್ಷ  ನವೆಂಬರ್ ೧ ರಂದು ಮಹಾರಾಷ್ಟ್ರ ಏಕೀಕರಣ ಸಮಿತಿ ರಾಜ್ಯೋತ್ಸವ ಸಂದರ್ಭದಲ್ಲಿ ಕರಾಳ ದಿನಾಚರಣೆಗೆ ಮುಂದಾಗುತ್ತಾ ಬಂದಿದ್ದು, ಈ ಬಾರಿಯೂ ಕಪ್ಪು ಬಟ್ಟೆ ಧರಸಿ ಬೆಳಗಾವಿ ನಗರದ ಕೆಲ ಪ್ರದೇಶದಲ್ಲಿ ಮೆರವಣಿಗೆ ನಡೆಸಿ ಕರಾಳ ದಿನಾಚರಣೆ ಆಚರಿಸಿದೆ.

ಕನ್ನಡಪರ ಸಂಘಟನೆಗಳು ಇದನ್ನು ತೀವ್ರವಾಗಿ ವಿರೋಧಿಸಿವೆ. ಈ ನಡುವೆ ಬೆಳಗಾವಿ ಮಾಳಮಾರುತಿ ಠಾಣೆಯ ಪೊಲೀಸ್ ಅಧಿಕಾರಿಯೊಬ್ಬರು ಕರಾಳ ದಿನಾಚರಣೆ ಮೆರವಣಿಗೆಯಲ್ಲಿ

ಪಾಲ್ಗೊಂಡು ಎಮ್ ಇಎಸ್ ಮುಖಂಡರೊಂದಿಗೆ ಸೆಲ್ಫಿ ತೆಗೆಸಿಕೊಂಡಿರುವುದಕ್ಕೆ ಸಾರ್ವಜನಿಕರು ಹಾಗೂ ಕನ್ನಡಪರ ಸಂಘಟನೆಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿವೆ.

***************

ಸುರಂಗ ರಸ್ತೆ ವಿಚಾರವಾಗಿ ಪ್ರತಿಪಕ್ಷ ನಾಯಕ ಆರ್. ಅಶೋಕ ನೇತೃತ್ವದಲ್ಲಿ ಸಮಿತಿ ರಚನೆಗೆ ಸಿದ್ಧ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಶೋಕ ಅವರು ಸೂಚಿಸಿದ ಕಡೆಯೇ ಲಾಲ್‌ಬಾಗ್ ಬಳಿ ಪ್ರವೇಶ ಹಾಗೂ ನಿರ್ಗಮನ ತಾಣ ರೂಪಿಸಲಾಗುವುದು ಎಂದು ಹೇಳಿದ್ದಾರೆ.

ಪರ್ಯಾಯ ಮಾರ್ಗಗಳ ಬಗ್ಗೆ ಚಿಂತನೆ ನಡೆಸಲಾಗುತ್ತಿದ್ದು, ಯಾರು ಆತಂಕ ಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

***************

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ ಕೆ-ಸೆಟ್ ನಾಳೆ ನಡೆಯಲಿದೆ.

೩೩ ವಿಷಯಗಳಿಗೆ ನಡೆಯುವ ಪರೀಕ್ಷೆಗೆ ಒಂದು ಲಕ್ಷದ ೩೬ ಸಾವಿರ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಬೆಂಗಳೂರು, ಬಳ್ಳಾರಿ, ಬೆಳಗಾವಿ, ಮಂಗಳೂರು ಸೇರಿದಂತೆ ೩೧೬ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ಬೆಂಗಳೂರಿನಲ್ಲಿ ಎಲ್ಲಾ ೩೩ ವಿಷಯಗಳ ಪರೀಕ್ಷೆ ನಡೆದರೆ, ಉಳಿದ ಜಿಲ್ಲೆಗಳಲ್ಲಿ ೧೧ ವಿಷಯಗಳ ಪರೀಕ್ಷೆಗಳು ನಡೆಯಲಿವೆ. ಬೆಳಗ್ಗೆ ೧೦ ಗಂಟೆಯಿಂದ ಮಧ್ಯಾಹ್ನ ೧ ಗಂಟೆಯವರೆಗೆ ಸಮಯ ನಿಗದಿ ಮಾಡಲಾಗಿದೆ.

ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕು. ಮುಖಚಹರೆ, ಪತ್ತೆಕಾರ್ಯ ನಡೆಯುವುದರಿಂದ ನಿಗದಿತ ಸಮಯಕ್ಕಿಂತ ಸಾಕಷ್ಟು ಮೊದಲು ಅಭ್ಯರ್ಥಿಗಳು ಹಾಜರಿರಬೇಕು ಎಂದು ಪರೀಕ್ಷಾ ಪ್ರಾಧಿಕಾರ ನಿರ್ದೇಶನ ನೀಡಿದೆ.

***************

ಕೊಚ್ಚಿ-ಬೆಂಗಳೂರು ವಂದೇ ಭಾರತ್ ರೈಲು ಶೀಘ್ರವೇ ಆರಂಭವಾಗಲಿದೆ. ಬಿಡುಗಡೆಯಾದ ವೇಳಾಪಟ್ಟಿಯ ಪ್ರಕಾರ ಕೊಚ್ಚಿ-ಬೆಂಗಳೂರು ವಂದೇ ಭಾರತ್ ರೈಲು ಮಧ್ಯಾಹ್ನ ೨-೨೦ಕ್ಕೆ ಎರ್ನಾಕುಲಂನಿಂದ ಹೊರಟು ರಾತ್ರಿ ೧೧-೦೦ ಗಂಟೆಗೆ ಬೆಂಗಳೂರು ತಲುಪಲಿದೆ.

ಬೆಳಗ್ಗೆ ೫-೧೦ಕ್ಕೆ ಬೆಂಗಳೂರಿನಿಂದ ಹೊರಟು, ಮಧ್ಯಾಹ್ನ ೧-೫೦ಕ್ಕೆ ಎರ್ನಾಕುಲಂಗೆ ಆಗಮಿಸಲಿದೆ. ಕೇವಲ ೯ ಗಂಟೆಗಳಲ್ಲಿ ೬೦೮ ಕಿಲೋಮೀಟರ್ ಕ್ರಮಿಸಲಿದೆ.

***************

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ವಿಚಾರ ಮಾಧ್ಯಮಗಳ ಸೃಷ್ಟಿ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವೆಲ್ಲ ಕಾಂಗ್ರೆಸ್ ಪಕ್ಷದ ಕಟ್ಟಾಳುಗಳು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಹೈಕಮಾಂಡ್ ಹೇಳಿದಂತೆ ಕೇಳುವೆವು ಹೊರತು ಇತರರ ಮಾತಿಗೆ ಕಿವಿಗೊಡುವುದಿಲ್ಲ ಎಂದು ಹೇಳಿದ್ದಾರೆ.

ಇನ್ನೊಂದೆಡೆ ಮಂಗಳೂರಿನಲ್ಲಿ ಮಾತನಾಡಿದ ದಕ್ಷಿಣಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಸಚಿವ ಸಂಪುಟ ವಿಸ್ತರಣೆ ಕುರಿತ ಯಾವುದೇ ಪ್ರಕ್ರಿಯೆ ಇದುವರೆಗೆ ಆರಂಭವಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

***************

ಕಲಬುರಗಿ ಜಿಲ್ಲೆಯ ನಾಲ್ಕು ಲಕ್ಷಕ್ಕೂ ಅಧಿಕ ರೈತರಿಗೆ ೬೫೦ ಕೋಟಿ ರೂಪಾಯಿ ಬೆಳೆವಿಮೆ ಪರಿಹಾರ ಸಿಕ್ಕಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ಸುಮಾರು ೩ ಲಕ್ಷದ ೯೫೨ ಮಂದಿ ರೈತರು ಬೆಳೆ ವಿಮೆ ನೋಂದಣಿ ಮಾಡಿಸಿಕೊಂಡಿದ್ದಾರೆ. ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲೆಯ ವೈಮಾನಿಕ ಸಮೀಕ್ಷೆ

ನಡೆಸಿ, ಜನಪ್ರತಿನಿಧಿ ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದು, ಎನ್‌ಡಿಆರ್‌ಎಫ್ ನಿಮಯಾವಳಿ ಪ್ರಕಾರ ಪರಿಹಾರ ನೀಡುವ ಭರವಸೆ ನೀಡಿದ್ದಾರೆ ಎಂದು ಹೇಳಿದ್ದಾರೆ.

****************

ವೃಷಭಾವತಿ ತ್ಯಾಜ್ಯ ಸಂಸ್ಕರಿತ ಯೋಜನೆಯ ಮೂರನೇ ಹಂತದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಕೆರೆಗಳಿಗೆ ನೀರು ಹರಿಯಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಚಿಂತಾಮಣಿ ತಾಲ್ಲೂಕಿನ ಅರಸೀಕೆರೆ-ಭಕ್ತರಹಳ್ಳಿ ಕೆರೆಗಳಿಗೆ ಬಾಗಿನ ಅರ್ಪಿಸಿ ಮಾತನಾಡಿದ ಅವರು, ಕಳೆದ ೧೫ ದಿನಗಳ ಹಿಂದೆ ಆರಂಭವಾದ ವೃಷಭಾವತಿ ತ್ಯಾಜ್ಯ ಸಂಸ್ಕರಿತ ಯೋಜನೆ ಮೊದಲ ಎರಡು ಹಂತಗಳಲ್ಲಿ ನೆಲಮಂಗಲ ಮತ್ತು ದೊಡ್ಡಬಳ್ಳಾಪುರ ಕೆರೆಗಳಿಗೆ ಹರಿದಿದೆ.

ಈ ಯೋಜನೆಯ ಮೂರನೇ ಹಂತ ಸಿದ್ಧವಾಗಿದ್ದು, ಈ ಹಂತದಲ್ಲಿ ದೇವನಹಳ್ಳಿ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಕೆರೆಗಳಿಗೆ ನೀರು ಹರಿಯಲಿದೆ. ಇದರಿಂದ ಈ ಭಾಗಗಳ ಅಂತರ್ಜಲ ಏರಿಕೆಗೆ ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

****************

ಕೇರಳದ ಮಂಗಳಪುರಂನಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಪಂದ್ಯಾವಳಿಯಲ್ಲಿ ಕೇರಳ ತಂಡದ ವಿರುದ್ಧದ ಕರ್ನಾಟಕ ಮೂರು ವಿಕೆಟ್ ನಷ್ಟಕ್ಕೆ ೩೧೯ ರನ್ ಗಳಿಸಿದೆ. ಕರುಣ್ ನಾಯರ್ ಶತಕ ಬಾರಿಸುವ ಮೂಲಕ ಮೊದಲ ದರ್ಜೆಯ ಕ್ರಿಕೆಟ್‌ನಲ್ಲಿ ೯ ಸಾವಿರ ರನ್‌ಗಳನ್ನು ಪೂರೈಸಿ, ರಾಹುಲ್ ದ್ರಾವಿಡ್, ಜಿ. ವಿಶ್ವನಾಥ್, ಬ್ರಿಜೇಶ್ ಪಟೇಲ್ ಅವರ ಸಾಲಿಗೆ ಸೇರಿದ್ದಾರೆ.

ಬಿ ಗುಂಪಿನಲ್ಲಿ ಕರ್ನಾಟಕ ತಂಡವು ಆಡಿರುವ ಎರಡೂ ಪಂದ್ಯಗಳು ಡ್ರಾ ಆಗಿವೆ.

ಮಯಾಂಕ್ ಅಗರ್ವಾಲ್ ನೇತೃತ್ವದ ಕರ್ನಾಟಕ ತಂಡ ಇನ್ನು ಟೂರ್ನಿಯಲ್ಲಿ ಜಯದ ಖಾತೆ ತೆರೆದಿಲ್ಲ.

********END********